**All India Radio: Bangalore**
**National Bulletin In Kannada**
**30.09.2026  7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<>><><*><><<>**

ಮುಖ್ಯಾಂಶಗಳು

**೧. ಅಣ್ವಸ್ತ್ರ ರಹಿತ ಜಗತ್ತಿನ ಗುರಿಗೆ ಭಾರತ ಬದ್ಧ- ವಿಶ್ವಸಂಸ್ಥೆ ಸಭೆಯಲ್ಲಿ ವಿದೇಶಾಂಗ ಕಾರ್ಯದರ್ಶಿ ಸಿಬಿ ಜಾರ್ಜ್ ಪುನರುಚ್ಚಾರ**

**೨. ನ್ಯೂಯಾರ್ಕ್‌ನಲ್ಲಿ ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿಯವರೊಂದಿಗೆ ಸಚಿವ ಡಾ.ಎಸ್.ಜೈಶಂಕರ್ ಮಾತುಕತೆ**

**೩. ೬೫ನೇ ರಾಷ್ಟ್ರೀಯ ಕಲಾ ಪ್ರದರ್ಶನ: ೨೦ ಸಾಧಕ ಕಲಾವಿದರಿಗೆ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಸನ್ಮಾನ**

**೪. ನವದೆಹಲಿಯಲ್ಲಿ ಭಾರತ-ದಕ್ಷಿಣ ಕೊರಿಯಾ ರಕ್ಷಣಾ ಉದ್ಯಮ ಹಾಗೂ ಸರಕು ಜಂಟಿ ಸಮಿತಿ ಸಭೆ ಸಂಪನ್ನ**

**೫. ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿ; ಭಾರತ- ವೆಸ್ಟ್ ಇಂಡೀಸ್ ನಡುವೆ ಇಂದು ಎರಡನೇ ಪಂದ್ಯ**

**<>><><*><><<>**

ಅಣ್ವಸ್ತ್ರಗಳಿಂದ ಮುಕ್ತವಾದ ವಿಶ್ವದ ನಿರ್ಮಾಣ ಹಾಗೂ ಅಂತಹ ಮಾರಕ ಅಸ್ತ್ರಗಳ ಸಂಪೂರ್ಣ ನಿರ್ಮೂಲನೆಯ ನಿಲುವಿಗೆ ಭಾರತ ಬದ್ಧವಾಗಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಪಶ್ಚಿಮ ವಲಯ ಕಾರ್ಯದರ್ಶಿ ಸಿಬಿ ಜಾರ್ಜ್ ಸ್ಪಷ್ಟಪಡಿಸಿದ್ದಾರೆ. ನ್ಯೂಯಾರ್ಕ್‌ನಲ್ಲಿರುವ ವಿಶ್ವಸಂಸ್ಥೆಯ ಕೇಂದ್ರ ಕಚೇರಿಯಲ್ಲಿ ಆಯೋಜಿಸಲಾಗಿದ್ದ 'ಪರಮಾಣು ಅಸ್ತ್ರಗಳ ಸಂಪೂರ್ಣ ನಿರ್ಮೂಲನೆಗಾಗಿ ಅಂತಾರಾಷ್ಟ್ರೀಯ ದಿನ'ದ ಉನ್ನತ ಮಟ್ಟದ ಸಭೆಯಲ್ಲಿ ಭಾರತದ ಪರವಾಗಿ ಅವರು ಈ ಹೇಳಿಕೆ ನೀಡಿದ್ದಾರೆ. ಇದಕ್ಕೂ ಮುನ್ನ, ಪ್ರಸ್ತುತ ನಡೆಯುತ್ತಿರುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಭಾಗವಾಗಿ ಆಯೋಜಿಸಲಾಗಿದ್ದ 'ಡರ್ಬನ್ ಘೋಷಣೆ ಮತ್ತು ಕ್ರಿಯಾ ಯೋಜನೆಯ' ೨೫ನೇ ವರ್ಷಾಚರಣೆಯ ಉನ್ನತ ಮಟ್ಟದ ಸಭೆಯಲ್ಲಿ ಸಿಬಿ ಜಾರ್ಜ್,

ಜನಾಂಗೀಯ ದ್ವೇಷ, ಜನಾಂಗೀಯ ತಾರತಮ್ಯ ಹಾಗೂ ವಿದೇಶಿಯರ ಮೇಲಿನ ಅಸಹಿಷ್ಣುತೆಯನ್ನು ತಡೆಗಟ್ಟಲು ಭಾರತ ನಿರಂತರವಾಗಿ ಶ್ರಮಿಸಲಿದೆ ಎಂದು ತಿಳಿಸಿದರು. ಇದಲ್ಲದೆ, ಘಾನಾ, ಜರ್ಮನಿ ಮತ್ತು ಫ್ರಾನ್ಸ್ ಜಂಟಿಯಾಗಿ ಆಯೋಜಿಸಿದ್ದ ಮತ್ತೊಂದು ಸಭೆಯಲ್ಲಿ ಭಾಗವಹಿಸಿ, ಆಯಾ ದೇಶಗಳ ಕಳುವಾದ ಅಥವಾ ಸ್ಥಳಾಂತರಿಸಲಾದ ಸಾಂಸ್ಕೃತಿಕ ಮತ್ತು ಪಾರಂಪರಿಕ ಆಸ್ತಿಗಳನ್ನು ಅವುಗಳ ಮೂಲ ದೇಶಗಳಿಗೆ ಗೌರವಪೂರ್ವಕವಾಗಿ ಮರಳಿಸಲು ಬಲವಾದ ಅಂತಾರಾಷ್ಟ್ರೀಯ ಸಹಕಾರ ಅಗತ್ಯ ಎಂದು ಅವರು ಪ್ರತಿಪಾದಿಸಿದ್ದರು.

**<>><><*><><<>**

ನ್ಯೂಯಾರ್ಕ್‌ನಲ್ಲಿರುವ ವಿಶ್ವಸಂಸ್ಥೆಯ ಕೇಂದ್ರ ಕಚೇರಿಯಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಅವರನ್ನು ಭೇಟಿಯಾಗಿ ಮಹತ್ವದ ಚರ್ಚೆ ನಡೆಸಿದರು. ಈ ಭೇಟಿಯ ವೇಳೆ ವಿಶ್ವಸಂಸ್ಥೆಯೊಂದಿಗೆ ಭಾರತವು ಹೊಂದಿರುವ ಸಕ್ರಿಯ ಸಹಕಾರವನ್ನು ಪ್ರಧಾನ ಕಾರ್ಯದರ್ಶಿಗಳು ಶ್ಲಾಘಿಸಿದರು. ಉಭಯ ನಾಯಕರು ಬಹುಪಕ್ಷೀಯತೆ, ಭಾರತ-ವಿಶ್ವಸಂಸ್ಥೆ ನಡುವಿನ ಜಂಟಿ ಸಹಕಾರ ಹಾಗೂ ಪ್ರಚಲಿತ ಜಾಗತಿಕ ಬೆಳವಣಿಗೆಗಳ ಕುರಿತು ವಿಸ್ತೃತವಾಗಿ ಸಮಾಲೋಚಿಸಿದರು. ವಿಶೇಷವಾಗಿ ಉಕ್ರೇನ್ ಸಂಘರ್ಷ ಮತ್ತು ಪಶ್ಚಿಮ ಏಷ್ಯಾದ ಪ್ರಸ್ತುತ ಸ್ಥಿತಿಗತಿಗಳ ಬಗ್ಗೆ ಸಭೆಯಲ್ಲಿ ಆಳವಾದ ಚರ್ಚೆ ನಡೆಯಿತು ಎಂದು ಪ್ರಧಾನ ಕಾರ್ಯದರ್ಶಿ ಗುಟೆರಸ್ ಅವರ ವಕ್ತಾರ ಸ್ಟೀಫನ್ ದುಜಾರಿಕ್ ಮಾಹಿತಿ ನೀಡಿದ್ದಾರೆ. ಜಾಗತಿಕ ಸಂಘರ್ಷಗಳು ಮತ್ತು ಅವುಗಳಿಂದ ಮುಖ್ಯವಾಗಿ ಜಾಗತಿಕ ದಕ್ಷಿಣ ರಾಷ್ಟ್ರಗಳ ಮೇಲಾಗುತ್ತಿರುವ ಪರಿಣಾಮಗಳನ್ನು ತಗ್ಗಿಸುವ ಅಗತ್ಯತೆಯ ಕುರಿತು ಮಾತುಕತೆ ಕೇಂದ್ರೀಕೃತವಾಗಿತ್ತು ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ೮೧ನೇ ಅಧಿವೇಶನದ ಉನ್ನತ ಮಟ್ಟದ ಕಾರ್ಯಕ್ರಮಗಳ ಹಿನ್ನೆಲೆಯಲ್ಲಿ ಈ ಭೇಟಿ ನಡೆದಿದ್ದು, ಆಹಾರ ಭದ್ರತೆ ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳ ಸುಧಾರಣೆಯ ಕುರಿತು ಸಹ ಚರ್ಚೆಗಳು ಜರುಗಿದವು.

**<>><><*><><<>**

ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ ವ್ಯಾಪ್ತಿಗೆ ಒಳಪಡುವ 'ರಾಷ್ಟ್ರೀಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ-ಎನ್‌ಆರ್‌ಐಡಿಎ ಹಾಗೂ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್- ಐಐಎಂ ಕೋಲ್ಕತ್ತಾ ನಡುವೆ ಮಹತ್ವದ ತಿಳುವಳಿಕಾ ಒಪ್ಪಂದ ಸಹಿಯಾಗಿದೆ. 'ಪ್ರಧಾನಮಂತ್ರಿ ಗ್ರಾಮ್ ಸಡಕ್ ಯೋಜನೆ - ಹಂತ-೪' ಮತ್ತು 'ಪಿಎಂ-ಜನಮನ್' ಯೋಜನೆಗಳ ಅಡಿಯಲ್ಲಿ ನಿರ್ಮಿಸಲಾದ ಗ್ರಾಮೀಣ ರಸ್ತೆಗಳ ಪರಿಣಾಮ ಹಾಗೂ ಸಾಮಾಜಿಕ-

ಆರ್ಥಿಕ ಪ್ರಭಾವದ ಕುರಿತು ಮುಂದಿನ ನಾಲ್ಕು ವರ್ಷಗಳ ಕಾಲ ಸಮಗ್ರ ಅಧ್ಯಯನ ನಡೆಸಲು ಈ ಒಪ್ಪಂದ ಮಾಡಿಕೊಳ್ಳಲಾಗಿದೆ. ಎನ್‌ಆರ್‌ಐಡಿಎ, ಗ್ರಾಮೀಣಾಭಿವೃದ್ಧಿ ಸಚಿವಾಲಯ ಮತ್ತು ಐಐಎಂ ಕೋಲ್ಕತ್ತಾ ನಡುವಿನ ಈ ಜಂಟಿ ಸಹಯೋಗ, ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಯೋಜನಾ ಪರಾಮರ್ಶೆ, ಕಾರ್ಯಸಾಧನೆಯ ಮೇಲ್ವಿಚಾರಣೆ, ಸಾಕ್ಷ್ಯಾಧಾರಿತ ನೀತಿ ನಿರೂಪಣೆ ಹಾಗೂ ಭವಿಷ್ಯದ ಕಾರ್ಯತಂತ್ರ ರೂಪಿಸಲು ಅತ್ಯಂತ ಮೌಲ್ಯಯುತ ಸಲಹೆ-ಸೂಚನೆಗಳನ್ನು ಒದಗಿಸಲಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯ ಮಾಹಿತಿ ನೀಡಿದೆ.

**<>><><*><><<>**

ಲಲಿತ ಕಲಾ ಅಕಾಡೆಮಿ ನವದೆಹಲಿಯಲ್ಲಿ ಆಯೋಜಿಸಿದ್ದ '೬೫ನೇ ರಾಷ್ಟ್ರೀಯ ಕಲಾ ಪ್ರದರ್ಶನ' ಸಮಾರಂಭದಲ್ಲಿ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರು ೨೦ ಪ್ರಶಸ್ತಿ ವಿಜೇತ ಕಲಾವಿದರನ್ನು ಅಭಿನಂದಿಸಿ ಗೌರವಿಸಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಸೃಜನಶೀಲತೆ ಮತ್ತು ಪರಿಸರ ಸುಸ್ಥಿರತೆಯನ್ನು ಒಂದೇ ವೇದಿಕೆಯಲ್ಲಿ ಜೋಡಿಸುವ ಪ್ರಾಮುಖ್ಯತೆಯನ್ನು ಪ್ರತಿಪಾದಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ 'ಸೇವಾ ಹಿ ಸಂಸ್ಕೃತಿ' ಅಭಿಯಾನವು ಸೃಜನಶೀಲತೆ ಹಾಗೂ ಸೇವಾ ಮನೋಭಾವ ಹೇಗೆ ಅರ್ಥಪೂರ್ಣವಾಗಿ ಒಂದಾಗಬಹುದು ಎಂಬುದಕ್ಕೆ ಸಾಕ್ಷಿಯಾಗಿದೆ ಎಂದು ಅವರು ಬಣ್ಣಿಸಿದರು. ತ್ಯಾಜ್ಯ ವಸ್ತುಗಳಿಗೆ ಕಲಾತ್ಮಕ ರೂಪ ನೀಡುವ ಲಲಿತ ಕಲಾ ಅಕಾಡೆಮಿಯ 'ವೇಸ್ಟ್ ಟು ವಂಡರ್' ಸೇರಿದಂತೆ ವಿವಿಧ ವಿನೂತನ ಪ್ರಯತ್ನಗಳನ್ನು ಶ್ಲಾಘಿಸಿದ ಸಚಿವರು, ತ್ಯಾಜ್ಯ ವಸ್ತುಗಳನ್ನು ಕಲಾಕೃತಿಗಳನ್ನಾಗಿ ಪರಿವರ್ತಿಸುವ ಮೂಲಕ ಕಲೆಯು ಪರಿಸರ ಸುಸ್ಥಿರತೆಯನ್ನು ಉತ್ತೇಜಿಸುವಲ್ಲಿ ವಹಿಸುವ ಪ್ರಮುಖ ಪಾತ್ರವನ್ನು ಶ್ಲಾಘಿಸಿದರು.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ದೇಶಾದ್ಯಂತ, 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ. 'ಜನ ಸೇವೆಯೇ ದೇಶ ಸೇವೆ' ಎಂಬ ಮಂತ್ರದಡಿ ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಖೇಲೋ ಇಂಡಿಯಾ ಸೇರಿದಂತೆ ಹಲವು ಉಪಕ್ರಮಗಳ

ಮೂಲಕ ಭಾರತ ಕ್ರೀಡಾ ಸಂಸ್ಕೃತಿಯ ಬಲವರ್ಧನೆ' ಕುರಿತ ಒಂದು ವರದಿ ಇಲ್ಲಿದೆ. ಭಾರತದಲ್ಲಿ ಕ್ರೀಡೆಯನ್ನು ಕೇವಲ ಸ್ಪರ್ಧೆಯಾಗಿ ನೋಡದೆ, ದೇಹದಾರ್ಢ್ಯ, ಶಿಸ್ತು ಮತ್ತು ರಾಷ್ಟ್ರೀಯ ಹೆಮ್ಮೆಯ ಸಂಕೇತವಾಗಿ ಬೆಳೆಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ 'ಖೇಲೋ ಇಂಡಿಯಾ' ಹಾಗೂ 'ಟಾಪ್ಸ್' ಯೋಜನೆಗಳು ಮಹತ್ವದ ಪಾತ್ರ ವಹಿಸುತ್ತಿವೆ. ದೇಶದ ಗ್ರಾಮೀಣ ಮಟ್ಟಕ್ಕೂ ಸುಸಜ್ಜಿತ ಕ್ರೀಡಾ ಮೂಲಸೌಕರ್ಯಗಳನ್ನು ತಲುಪಿಸಿರುವ ಖೇಲೋ ಇಂಡಿಯಾ ಯೋಜನೆ ಅಡಿಯಲ್ಲಿ ಈಗಾಗಲೇ ೧ ಸಾವಿರಕ್ಕೂ ಹೆಚ್ಚು ತರಬೇತಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಇದಲ್ಲದೆ, ಉನ್ನತ ಮಟ್ಟದ ಸಾಮರ್ಥ್ಯ ಹೊಂದಿರುವ ೨ ಸಾವಿರದ ೭೦೦ಕ್ಕೂ ಹೆಚ್ಚು ಅಥ್ಲೀಟ್‌ಗಳಿಗೆ ವಾರ್ಷಿಕ ೬ ಲಕ್ಷ ರೂಪಾಯಿಗೂ ಅಧಿಕ ಹಣಕಾಸಿನ ನೆರವು ನೀಡುವ ಮೂಲಕ ಅವರ ಕ್ರೀಡಾ ಕನಸುಗಳಿಗೆ ಬೆಂಬಲ ನೀಡಲಾಗುತ್ತಿದೆ. ಸಾಮಾನ್ಯ ಹಂತದ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸಲು 'ಖೇಲೋ ಇಂಡಿಯಾ' ನೆರವಾದರೆ, ಜಾಗತಿಕ ಮಟ್ಟದಲ್ಲಿ ಪದಕ ಗೆಲ್ಲುವ ಸಾಮರ್ಥ್ಯವಿರುವ ಆಟಗಾರರಿಗೆ 'ಟಾಪ್ಸ್' ಯೋಜನೆ ವಿಶೇಷ ತರಬೇತಿ ಹಾಗೂ ತಾಂತ್ರಿಕ ನೆರವು ನೀಡುತ್ತಿದೆ. ಈ ಸುಧಾರಿತ ಕ್ರೀಡಾ ವ್ಯವಸ್ಥೆಯ ಫಲವಾಗಿ ಭಾರತವು ಒಲಿಂಪಿಕ್ಸ್, ಏಷ್ಯನ್ ಗೇಮ್ಸ್ ಹಾಗೂ ಕಾಮನ್‌ವೆಲ್ತ್ ಕೂಟಗಳಲ್ಲಿ ತನ್ನ ಸಾರ್ವಕಾಲಿಕ ಶ್ರೇಷ್ಠ ಪ್ರದರ್ಶನವನ್ನು ಕಾಯ್ದುಕೊಂಡಿದೆ. ದೇಶಾದ್ಯಂತ ಕ್ರೀಡಾಂಗಣಗಳು ಮತ್ತು ತರಬೇತಿ ಅಕಾಡೆಮಿಗಳನ್ನು ಆಧುನಿಕೀಕರಣಗೊಳಿಸುವ ಮೂಲಕ ಈ ಯೋಜನೆಗಳು ಭಾರತವನ್ನು ಕ್ರೀಡಾ ಪ್ರಧಾನ ರಾಷ್ಟ್ರವನ್ನಾಗಿ ರೂಪಿಸುತ್ತಿವೆ.

**<>><><*><><<>**

ರಕ್ಷಣಾ ಉದ್ಯಮ ಮತ್ತು ಸರಕು ಸಹಕಾರಕ್ಕೆ ಸಂಬಂಧಿಸಿದಂತೆ ಭಾರತ ಹಾಗೂ ದಕ್ಷಿಣ ಕೊರಿಯಾ ನಡುವಿನ ೧೦ನೇ ಜಂಟಿ ಸಮಿತಿ ಸಭೆಯು ನವದೆಹಲಿಯಲ್ಲಿ ನಿನ್ನೆ ನಡೆಯಿತು. ಉಭಯ ದೇಶಗಳ ನಡುವೆ ರಕ್ಷಣಾ ಉತ್ಪಾದನೆ ಹಾಗೂ ಸರಕು ಕ್ಷೇತ್ರದಲ್ಲಿ ಜಂಟಿ ಸಹಕಾರವನ್ನು ಮತ್ತಷ್ಟು ವಿಸ್ತರಿಸುವ ಮತ್ತು ಬಲಪಡಿಸುವ ಮಾರ್ಗಗಳ ಕುರಿತು ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಲಾಯಿತು. ಈ ಸಭೆಯ ಜಂಟಿ ಅಧ್ಯಕ್ಷತೆಯನ್ನು ಭಾರತ ಸರ್ಕಾರದ ರಕ್ಷಣಾ ಉತ್ಪಾದನಾ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ದಿನೇಶ್ ಮಹೂರ್ ಹಾಗೂ ದಕ್ಷಿಣ ಕೊರಿಯಾದ ರಕ್ಷಣಾ ಸ್ವಾಧೀನ ಕಾರ್ಯಕ್ರಮ ಆಡಳಿತದ ಹೆಚ್ಚುವರಿ ಮತ್ತು ಉಪ ಸಚಿವ ಕಿಮ್ ಇಲ್ ಡಾಂಗ್ ವಹಿಸಿದ್ದರು. ಭಾರತದಲ್ಲಿನ ದಕ್ಷಿಣ ಕೊರಿಯಾದ ರಾಯಭಾರಿ ಸಾಂಗ್ ಹೋ ಲೀ ಹಾಗೂ ಉಭಯ ದೇಶಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದ ಈ ಸಭೆಯ ಹಿನ್ನೆಲೆಯಲ್ಲಿ, ಕಿಮ್ ಇಲ್ ಡಾಂಗ್ ಅವರು ಭಾರತದ ರಕ್ಷಣಾ ರಾಜ್ಯ ಸಚಿವ ಸಂಜಯ್ ಸೇಠ್ ಅವರನ್ನು ಭೇಟಿ ಮಾಡಿ ದ್ವಿಪಕ್ಷೀಯ ರಕ್ಷಣಾ ಬಾಂಧವ್ಯವನ್ನು ಮತ್ತಷ್ಟು ಹೆಚ್ಚಿಸುವ ಬಗ್ಗೆ ಚರ್ಚಿಸಿದರು.

**<>><><*><><<>**

ಗುವಾಹಟಿಯ ಬರ್ಸಾಪರಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮೂರು ಪಂದ್ಯಗಳ ಪುರುಷರ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ, ವೆಸ್ಟ್ ಇಂಡೀಸ್ ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೨ ಗಂಟೆಗೆ ಆರಂಭವಾಗಲಿದೆ. ತಿರುವನಂತಪುರದಲ್ಲಿ ನಡೆದ ಮೊದಲ ಪಂದ್ಯದಲ್ಲಿ ಎಂಟು ವಿಕೆಟ್‌ಗಳ ಜಯ ದಾಖಲಿಸಿರುವ ಭಾರತ, ಸರಣಿಯಲ್ಲಿ ಆರಂಭಿಕ ಮುನ್ನಡೆ ಸಾಧಿಸಿದೆ. ಮೊದಲ ಪಂದ್ಯದಲ್ಲಿ ಸೋಲು ಅನುಭವಿಸಿರುವ ವೆಸ್ಟ್ ಇಂಡೀಸ್, ಎರಡನೇ ಪಂದ್ಯದಲ್ಲಿ ಪುಟಿದೇಳುವ ನಿರೀಕ್ಷೆಯಲ್ಲಿದೆ.

**<>><><*><><<>**

ಜಮ್ಮು ಮತ್ತು ಕಾಶ್ಮೀರದ ಬಡ್ಗಾಮ್ ಜಿಲ್ಲೆಯ ಯುಸ್ಮಾರ್ಗ್ ಬಳಿಯ ಕೊರಾಗ್ ಅರಣ್ಯ ಪ್ರದೇಶದಲ್ಲಿ ನಿನ್ನೆ ಸಂಜೆ ಭದ್ರತಾ ಪಡೆಗಳು ನಡೆಸಿದ ಜಂಟಿ ಎನ್‌ಕೌಂಟರ್‌ನಲ್ಲಿ ಪಾಕಿಸ್ತಾನ ಮೂಲದ ಲಷ್ಕರ್ ಎ ತೊಯ್ಬಾ ಭಯೋತ್ಪಾದಕ ಸಂಘಟನೆಯ ಪ್ರಮುಖ ಕಮಾಂಡರ್ ಸುಲೈಮಾನ್ ಶಹಾ 'ಮೂಸಾ' ಹತನಾಗಿದ್ದಾನೆ. ಭಾರತೀಯ ಸೇನೆಯ ಚಿನಾರ್ ಕೋರ್, ಜಮ್ಮು-ಕಾಶ್ಮೀರ ಪೊಲೀಸರು ಹಾಗೂ ಸಿಆರ್‌ಪಿಎಫ್ ಪಡೆಗಳು ಜಂಟಿಯಾಗಿ ನಡೆಸಿದ 'ಆಪರೇಷನ್ ಕೊರಾಗ್' ಕಾರ್ಯಾಚರಣೆಯಲ್ಲಿ ಈ ಪ್ರಮುಖ ಯಶಸ್ಸು ದೊರೆತಿದೆ. ಹಲವು ಉಗ್ರ ಕೃತ್ಯಗಳಲ್ಲಿ ಭಾಗಿಯಾಗಿದ್ದ ಮೂಸಾ, ಕಳೆದ ಸೆಪ್ಟೆಂಬರ್ ೫ ರಂದು ಯುಸ್ಮಾರ್ಗ್ ಗುಡ್ಡಗಾಡು ಪ್ರದೇಶದಲ್ಲಿ ನಡೆದಿದ್ದ ಕಾರ್ಯಾಚರಣೆಯ ವೇಳೆ ತಪ್ಪಿಸಿಕೊಂಡಿದ್ದನು. ಆ ಸಂದರ್ಭದಲ್ಲಿ ಆತನ ನಿಕಟವರ್ತಿ ಯಾಸಿರ್ ಹತನಾಗಿದ್ದನು. ಇದೀಗ ನಿಖರ ಮಾಹಿತಿಯನ್ನಾಧರಿಸಿ ನಡೆಸಿದ ಎನ್‌ಕೌಂಟರ್‌ನಲ್ಲಿ ಆತನನ್ನು ಹೊಡೆದುರುಳಿಸಲಾಗಿದ್ದು, ಪ್ರದೇಶದಲ್ಲಿ ಭದ್ರತಾ ಪಡೆಗಳ ಶೋಧ ಕಾರ್ಯಾಚರಣೆ ಮುಂದುವರಿದಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**